**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ. ದಂ.ಯವರ ನ್ಯಾಯಾಲಯ, ಕುಂದಾಪುರ**

**ಸಿ.ಸಿ ನಂಬ್ರ: 585/2021**

ಸರ್ಕಾರದ ಪರ
ಗಂಗೊಳ್ಳಿ ಠಾಣಾ ಪೊಲೀಸರು --- ಪಿರ್ಯಾದಿದಾರರು

-ಮತ್ತು-

ಮಂಜೂರ್ ಇಲಾಹಿದ್ --- ಆರೋಪಿತರು

**"ದೋಷಾರೋಪಣೆ"**

**ಶ್ರೀಮತಿ ಶೃತಿಶ್ರೀ ಎಸ್., ಬಿ.ಎ., ಎಲ್‌ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ,. ಕುಂದಾಪುರ ಆದ ನಾನು ಆರೋಪಿತರಾದ ನಿಮಗೆ ಈ ಮೂಲಕ ಮಾಡುವ ದೋಷಾರೋಪಣೆ ಏನೆಂದರೆ:**

ಮಂಜೂರ್ ಇಲಾಹಿದ್, 27 ವರ್ಷ,
ತಂದೆ: ಇಕ್ಬಾಲ್,
ವಾಸ: 5ನೇ ತಿರುವು, ಅಮತ ಅಲ್ಲಾ,
ಸಂತೋಷ ನಗರ,
ಹೆಮ್ಮಾಡಿ ಗ್ರಾಮ, ಕುಂದಾಪುರ. --- ಆರೋಪಿತರು

ಗಂಗೊಳ್ಳಿ ಪೊಲೀಸ್ ಠಾಣಾ ಸರಹದ್ದಿನಲ್ಲಿ, ಪಿರ್ಯಾದುದಾರರ ಮೇಲಿನ ಹಳೆಯ ದ್ವೇಷದ ಹಿನ್ನೆಲೆಯಲ್ಲಿ ದ್ವೇಷ ಸಾಧನೆಗಾಗಿ ದಿ. 03.11.2020 ರಂದು ಮಧ್ಯಾಹ್ನ 1.00 ಗಂಟೆಯ ಸಮಯಕ್ಕೆ ಹೊಸಾಡು ಗ್ರಾಮದ ಮೋವಾಡಿ ಕ್ರಾಸ್ ಸಮೀಪ ಇರುವ ಎಸರ್ ಪೆಟ್ರೋಲ್ ಬಂಕ್ ಸಮೀಪ ರಾ.ಹೆ. 66 ರ ಬದಿಯಲ್ಲಿ ಪಿರ್ಯಾದುದಾರರ ಮೋಟಾರು ಸೈಕಲಿಗೆ ಆರೋಪಿಯು KA 20 EA 5038 YAMAHA R 15 ನೇ ಮೋಟಾರು ಸೈಕಲನ್ನು ಅಡ್ಡ ಇಟ್ಟು ತಡೆದು ನಿಲ್ಲಿಸಿದ್ದು ಆ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ.504 ರನ್ವಯ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

2. ಮೇಲ್ಕಂಡ ದಿನ, ಸಮಯ ಹಾಗೂ ಸ್ಥಳದಲ್ಲಿ ಆರೋಪಿತರಾದ ನೀವು ಪಿರ್ಯಾದುದಾರರಿಗೆ ಬೇವಾರ್ಸಿ, ಬೋಳಿಮಗನೇ, ಸೂಳೆಮಗನೆ ಎಂದು ಅವಾಚ್ಯ ಶಬ್ದದಿಂದ ಬೈದು ಅವಮಾನ ಮಾಡಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ.504 ರನ್ವಯ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

3. ಮೇಲ್ಕಂಡ ದಿನ, ಸಮಯ ಹಾಗೂ ಸ್ಥಳದಲ್ಲಿ ಆರೋಪಿತರಾದ ನೀವು ಪಿರ್ಯಾದುದಾರರಿಗೆ ರಸ್ತೆಯ ಬದಿಯಲ್ಲಿ ಬಿದ್ದಿದ್ದ ಒಂದು ಬಿಯರ್ ಬಾಟಲಿ ತೆಗೆದುಕೊಂಡು ತಲೆಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನು ಉಂಟು ಮಾಡಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ

ಸಂಹಿತೆ ಕಲಂ.324 ರನ್ವಯ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

4. ಮೇಲ್ಕಂಡ ದಿನ, ಸಮಯ ಹಾಗೂ ಸ್ಥಳದಲ್ಲಿ ಆರೋಪಿತರಾದ ನೀವು ಬಿಯರ್ ಬಾಟಲಿಯನ್ನು ಹಿಡಿದುಕೊಂಡು ಪಿರ್ಯಾದುದಾರರಿಗೆ ನಿನ್ನನ್ನು ಕೊಂದು ಮುಗಿಸುವುದಾಗಿ ಜೀವ ಬೆದರಿಕೆ ಹಾಕಿದ್ದು, ಆ ಮೂಲಕ ಆರೋಪಿತರಾದ ನೀವು ಭಾರತೀಯ ದಂಡ ಸಂಹಿತೆ ಕಲಂ.506 ರನ್ವಯ ಶಿಕ್ಷಾರ್ಹವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಮಾಡಿರುವಿರಿ.

(ಸದರಿ ಆರೋಪಗಳ ಕುರಿತಂತೆ ನೀವು ಈ ನ್ಯಾಯಾಲಯದಿಂದ ವಿಚಾರಣೆಗೆ ಗುರಿಯಾಗಬೇಕೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ )

ದಿನಾಂಕಃ 26/06/2025

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ., ಕುಂದಾಪುರ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ನ್ಯಾಯಾಲಯ, ಕುಂದಾಪುರ

**ಸಿ.ಸಿ ನಂಬ್ರ: 585/2021**

ಫಿರ್ಯಾದುದಾರರು : ಸರಕಾರದ ಪರವಾಗಿ ಗಂಗೊಳ್ಳಿ ಠಾಣಾ ಪೋಲಿಸರು,

**- ವಿರುದ್ಧ-**

ಆರೋಪಿ : **ಇಲಾಹಿದ್ ಮೂಜುರ್,** ತಂದೆ: ಇಕ್ಬಾಲ್,

**1. ನಿಮಗೆ ಓದಿ ಹೇಳಿದ ದೋಷಾರೋಪಣೆಯು ಅರ್ಥವಾಗಿದೆಯೇ?**

ಉ.

**2.** ನೀವು ತಪ್ಪನ್ನು ಒಪ್ಪಿಕೊಳ್ಳುತ್ತೀರ ಅಥವಾ ವಿಚಾರಣೆ ಮಾಡ ಬಯಸುವಿರಾ **?**

ಉ.

ಮೇಲ್ಕಂಡ ದೋಷಾರೋಪಣಾ ಸಾರಾಂಶವನ್ನು ಆರೋಪಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಆರೋಪಿ ಕೊಟ್ಟ ಉತ್ತರವನ್ನು ಬೆರದುಕೊಂಡಿದ್ದು ಅವು ಸರಿಯಾಗಿರುತ್ತವೆಂದು ಈ ಮೂಲಕ ದೃಢಿಕರಿಸುತ್ತೇನೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,
ಕುಂದಾಪುರ.